**All India Radio: Bangalore**
**National Bulletin In Kannada**
**18.05.2025  19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**18.05.2025  19.35 p.m.**
**<><><><>**

ಮುಖ್ಯಾಂಶಗಳು

1. ಆರ್ಥಿಕ ಸಂಕಷ್ಟದಲ್ಲಿರುವ ಪ್ರಾಥಮಿಕ ಕೃಷಿ ಸಾಲ ಸೊಸೈಟಿಗಳ ಆರ್ಥಿಕ ಪುನರುಜ್ಜೀವನಕ್ಕೆ ಹೊಸ ನೀತಿ ಯೋಜನೆ ಘೋಷಿಸಿದ ಕೇಂದ್ರ ಸಚಿವ ಅಮಿತ್ ಶಾ
2. ಮುಂದಿನ ಕಂತು ಬಿಡುಗಡೆಗೆ ಪಾಕಿಸ್ತಾನಕ್ಕೆ ೧೧ ಹೊಸ ಷರತ್ತು ವಿಧಿಸಿದ ಐಎಂಎಫ್
3. ಹೈದರಾಬಾದ್‌ನಲ್ಲಿ ಅಗ್ನಿ ಅವಘಡ ; ಮೃತರ ಸಂಖ್ಯೆ ೧೭ಕ್ಕೆ ಏರಿಕೆ
4. ಐಪಿಎಲ್ ಟಿ-೨೦ ಕ್ರಿಕೆಟ್ ; ರಾಜಸ್ಥಾನ್ ರಾಯಲ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ ತಂಡಕ್ಕೆ ೧೦ ರನ್‌ಗಳ ಜಯ

<><><><>

ದಿವಾಳಿಯಾಗಿರುವ, ಆರ್ಥಿಕ ಸಂಕಷ್ಟದಲ್ಲಿರುವ ಪ್ರಾಥಮಿಕ ಕೃಷಿ ಸಾಲ ಸೊಸೈಟಿಗಳ ಆರ್ಥಿಕ ಪುನರುಜ್ಜೀವನಕ್ಕೆ ಗುರಿಯನ್ನು ಹೊಂದಿರುವ ಹೊಸ ನೀತಿ ಯೋಜನೆಗಳನ್ನು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಘೋಷಿಸಿದರು. ಗುಜರಾತ್ ರಾಜ್ಯ ಸಹಕಾರಿ ಒಕ್ಕೂಟವು ಅಹಮದಾಬಾದ್‌ನ ಸೈನ್ಸ್ ಸಿಟಿಯಲ್ಲಿ ಆಯೋಜಿಸಿದ್ದ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಪ್ರಾಥಮಿಕ ಕೃಷಿ ಸಾಲ ಸೊಸೈಟಿ ಪುನಶ್ಚೇತನಗೊಳಿಸುವ ಮೂಲಕ ಸಹಕಾರಿ ಮೂಲಸೌಕರ್ಯ ಅಭಿವೃದ್ಧಿ ಬಲಪಡಿಸುವ ಸರ್ಕಾರದ ಬದ್ಧತೆಯನ್ನು ಒತ್ತಿ ಹೇಳಿದರು. ೨೦೨೯ರ ವೇಳೆಗೆ ದೇಶಾದ್ಯಂತ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಸಾಲ ಸೊಸೈಟಿ ನಿರ್ಮಾಣ ಮಾಡುವ ಗುರಿಯನ್ನು ವಿವರಿಸಿದರು. ಸಹಕಾರಿ ಠೇವಣಿಯಲ್ಲಿ ೧೧ ಸಾವಿರ ಕೋಟಿ ರೂಪಾಯಿ ಹೆಚ್ಚಳದ ಕುರಿತು ಮಾಹಿತಿ ನೀಡಿದರು. ಗುಜರಾತ್ ಸಹಕಾರ ಒಕ್ಕೂಟದ ಮಾದರಿಯನ್ನು ಶ್ಲಾಘಿಸಿದ್ದು, ಆರ್ಥಿಕ ಬಲವರ್ಧನೆ, ತಂತ್ರಜ್ಞಾನ ಬಳಕೆಯಿಂದ ಪಾರದರ್ಶಕತೆ ಹಾಗೂ ಸಹಕಾರಿ ತರಬೇತಿಗೆ ಉತ್ತೇಜನ ನೀಡುವಂತೆ ಸಹಕಾರಿ ಮುಖಂಡರಿಗೆ ಸಚಿವ ಅಮಿತ್ ಶಾ ಒತ್ತಾಯಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಕಳೆದ ೧೦ ವರ್ಷಗಳಲ್ಲಿ ವಿವಿಧ ಯೋಜನೆಗಳ ಮೂಲಕ ಆರೋಗ್ಯ ಕ್ಷೇತ್ರದಲ್ಲಿ ಅಭೂತಪೂರ್ವ ಬದಲಾವಣೆಗಳನ್ನು ತಂದಿದೆ. ದೇಶದ ೭೦ ಕೋಟಿ ನಾಗರಿಕರು ಆಯುಷ್ಮಾನ್ ಭಾರತ್ ಯೋಜನೆಯ ಲಾಭ ಪಡೆಯುತ್ತಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಗುಜರಾತ್‌ನ ಮೆಹ್ಸಾನಾ ಜಿಲ್ಲೆಯ ಗೋಜಾರಿಯಾದಲ್ಲಿ ನೂತನವಾಗಿ ನಿರ್ಮಿಸಲಾದ ಕೆ.ಕೆ.ಪಟೇಲ್ ಮತ್ತು ಮಧುಬೆನ್ ಕೆ.ಪಟೇಲ್ ನರ್ಸಿಂಗ್ ಕಾಲೇಜಿನ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು. ಕಳೆದ ೧೦ ವರ್ಷಗಳಲ್ಲಿ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆ- ಏಮ್ಸ್ ಸಂಖ್ಯೆ ೭ ರಿಂದ ೨೩ಕ್ಕೆ ಏರಿಕೆಯಾಗಿದೆ ಎಂದರು.

<><><>

ಭಯೋತ್ಪಾದನೆಯ ವಿರುದ್ಧ ಭಾರತದ ಸಾಮೂಹಿಕ ಸಂಕಲ್ಪವನ್ನು ಪ್ರತಿಬಿಂಬಿಸುವ ಆಪರೇಷನ್ ಸಿಂದೂರ್ ಅಡಿಯಲ್ಲಿ ಏಳು ಸರ್ವಪಕ್ಷ ನಿಯೋಗಗಳು ಶೀಘ್ರದಲ್ಲೇ ಪ್ರಮುಖ ರಾಷ್ಟ್ರಗಳೊಂದಿಗೆ ತೊಡಗಿಸಿಕೊಳ್ಳಲಿವೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಘೋಷಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವ ಕಿರಣ್ ರಿಜಿಜು, ಈ ನಿಯೋಗಗಳನ್ನು ಪ್ರತಿನಿಧಿಸುವ ಸಂಸದರು ಮತ್ತು ನಿಯೋಗಗಳ ಪಟ್ಟಿಯನ್ನು ಹಂಚಿಕೊಂಡಿದ್ದಾರೆ. ೫೯ ಸಂಸತ್ ಸದಸ್ಯರನ್ನು ಒಳಗೊಂಡ ಏಳು ನಿಯೋಗಗಳು, ಒಟ್ಟು ೩೨ ದೇಶಗಳಿಗೆ ಭೇಟಿ ನೀಡಲಿವೆ. ಪ್ರತಿ ನಿಯೋಗದಲ್ಲಿ ನಿವೃತ್ತ ರಾಜತಾಂತ್ರಿಕರೂ ಇರುತ್ತಾರೆ. ಬಿಜೆಪಿ ಸಂಸದ ಬೈಜಯಂತ್ ಪಾಂಡಾ ನೇತೃತ್ವದ ಮೊದಲ ನಿಯೋಗ, ಸೌದಿ ಅರೇಬಿಯಾ, ಬಹ್ರೇನ್, ಕುವೈತ್ ಮತ್ತು ಅಲ್ಜೀರಿಯಾಕ್ಕೆ ಭೇಟಿ ನೀಡಲಿದೆ. ಬಿಜೆಪಿ ಸಂಸದ ರವಿಶಂಕರ್ ಪ್ರಸಾದ್ ನೇತೃತ್ವದ ಎರಡನೇ ಗುಂಪು ಯುಕೆ, ಫ್ರಾನ್ಸ್, ಜರ್ಮನಿ, ಇಯು, ಇಟಲಿ ಮತ್ತು ಡೆನ್ಮಾರ್ಕ್‌ಗೆ ಭೇಟಿ ನೀಡಲಿದೆ. ಮೂರನೇ ನಿಯೋಗವನ್ನು ಜೆಡಿಯು ಸಂಸದ ಸಂಜಯ್ ಕುಮಾರ್ ಝಾ ನೇತೃತ್ವ ವಹಿಸಲಿದ್ದು, ಅವರು ಇಂಡೋನೇಷ್ಯಾ, ಮಲೇಷ್ಯಾ, ದಕ್ಷಿಣ ಕೊರಿಯಾ, ಜಪಾನ್ ಮತ್ತು ಸಿಂಗಾಪುರಕ್ಕೆ ಭೇಟಿ ನೀಡಲಿದ್ದಾರೆ. ಶಿವಸೇನಾ ಸಂಸದ ಶ್ರೀಕಾಂತ್ ಏಕನಾಥ್ ಶಿಂಧೆ ನೇತೃತ್ವದ ನಾಲ್ಕನೇ ಗುಂಪಿನಲ್ಲಿ ಯುಎಇ, ಲೈಬೀರಿಯಾ, ಕಾಂಗೋ ಮತ್ತು ಸಿಯೆರಾ ಲಿಯೋನ್‌ಗೆ ಭೇಟಿ ನೀಡಲಿದ್ದಾರೆ. ಕಾಂಗ್ರೆಸ್ ಸಂಸದ ಶಶಿ ತರೂರ್ ನೇತೃತ್ವದ ಐದನೇ ನಿಯೋಗವು ಅಮೆರಿಕ, ಪನಾಮ, ಗಯಾನಾ, ಬ್ರೆಜಿಲ್ ಮತ್ತು ಕೊಲಂಬಿಯಾಕ್ಕೆ ಭೇಟಿ ನೀಡಲಿದೆ. ಡಿಎಂಕೆ ಸಂಸದೆ ಕನಿಮೋಳಿ ಕರುಣಾನಿಧಿ ನೇತೃತ್ವದ ಆರನೇ ನಿಯೋಗವು ಸ್ಪೇನ್, ಗ್ರೀಸ್, ಸ್ಲೊವೇನಿಯಾ, ಲಾಟ್ವಿಯಾ ಮತ್ತು ರಷ್ಯಾಕ್ಕೆ ಭೇಟಿ ನೀಡಲಿದೆ. ಏಳನೇ ನಿಯೋಗದ ನೇತೃತ್ವವನ್ನು ಎನ್‌ಸಿಪಿ ಸಂಸದೆ ಸುಪ್ರಿಯಾ ಸುಳೆ ವಹಿಸಲಿದ್ದು, ಈಜಿಪ್ಟ್, ಕತಾರ್, ಇಥಿಯೋಪಿಯಾ ಮತ್ತು ದಕ್ಷಿಣ ಆಫ್ರಿಕಾಕ್ಕೆ ಭೇಟಿ ನೀಡಲಿದೆ.

<><><>

ಅಂತಾರಾಷ್ಟ್ರೀಯ ಹಣಕಾಸು ನಿಧಿ - ಐಎಂಎಫ್ ತನ್ನ ಮುಂದಿನ ಕಂತನ್ನು ಬಿಡುಗಡೆ ಮಾಡಲು ಪಾಕಿಸ್ತಾನಕ್ಕೆ ೧೧ ಹೊಸ ಷರತ್ತುಗಳನ್ನು ವಿಧಿಸಿದೆ. ಅಲ್ಲದೇ, ಭಾರತದೊಂದಗಿನ ಉದ್ವಿಗ್ನತೆಯು ಮುಂದುವರಿದರೆ ಅಥವಾ ಮತ್ತಷ್ಟು ಹದಗೆಟ್ಟರೆ, ಸಾಲ ಯೋಜನೆಯ ಹಣಕಾಸು, ಬಾಹ್ಯ ಮತ್ತು ಸುಧಾರಣಾ ಗುರಿಗಳಿಗೆ ಅಪಾಯವನ್ನು ಹೆಚ್ಚಿಸಬಹುದು ಎಂದು ಐಎಂಎಫ್ ಎಚ್ಚರಿಸಿದೆ. ಈ ೧೧ ಹೊಸ ಷರತ್ತುಗಳು ಸೇರಿದಂತೆ ಪಾಕಿಸ್ತಾನಕ್ಕೆ ಐಎಂಎಫ್ ವಿಧಿಸಿದ ಷರತ್ತುಗಳ ಸಂಖ್ಯೆ ೫೦ಕ್ಕೆ ಏರಿಕೆಯಾಗಿದೆ. ೧೭.೬ ಟ್ರಿಲಿಯನ್ ರೂಪಾಯಿಗಳ ಹೊಸ ಬಜೆಟ್‌ಗೆ ಸಂಸತ್ತಿನ ಅನುಮೋದನೆ, ವಿದ್ಯುತ್ ಬಿಲ್‌ಗಳ ಮೇಲೆ ಸೇವಾ ಶುಲ್ಕ ಹೆಚ್ಚಳ, ೩ ವರ್ಷಗಳಿಗಿಂತ ಹಳೆಯದಾದ ಬಳಸಿದ ಕಾರುಗಳ ಆಮದಿನ ಮೇಲಿನ ನಿರ್ಬಂಧಗಳನ್ನು ತೆಗೆದು ಹಾಕುವುದು - ಪಾಕಿಸ್ತಾನದ ಮೇಲೆ ಐಎಂಎಫ್ ವಿಧಿಸಿದ ಹೊಸ ಷರತ್ತುಗಳ ಪಟ್ಟಿಯಲ್ಲಿ ಸೇರಿವೆ.

<><><>

ತೆಲಂಗಾಣ ರಾಜಧಾನಿ ಹೈದ್ರಾಬಾದ್‌ನಲ್ಲಿ ಇಂದು ಬೆಳಗ್ಗೆ ಸಂಭವಿಸಿದ ಅಗ್ನಿ ಅವಘಡದಲ್ಲಿ ೧೭ ಮಂದಿ ಮೃತಪಟ್ಟು, ಅನೇಕರು ಗಾಯಗೊಂಡಿದ್ದಾರೆ. ಮೃತರಲ್ಲಿ ೮ ಮಕ್ಕಳು ಮತ್ತು ೬ ಮಂದಿ ಮಹಿಳೆಯರು ಸೇರಿದ್ದಾರೆ. ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಹೈದ್ರಾಬಾದ್‌ನ ಚಾರ್ ಮಿನಾರ್ ಬಳಿ ಇರುವ

ಗುಲ್ಜಾರ್ ಹೌಸ್‌ನಲ್ಲಿ ಬೆಳಗಿನ ಜಾವ ೬ ಗಂಟೆಯ ವೇಳೆಯಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಪಕ್ಕದಲ್ಲಿರುವ ಶ್ರೀಕೃಷ್ಣ ಮುತ್ತಿನ ಮಾರಾಟ ಮಳಿಗೆಗೂ ಸಹ ಬೆಂಕಿ ವ್ಯಾಪಿಸಿತು. ಸುದ್ದಿ ತಿಳಿದ ಕೂಡಲೇ ೧೧ಕ್ಕೂ ಹೆಚ್ಚು ಅಗ್ನಿಶಾಮಕ ವಾಹನಗಳು ಸ್ಥಳಕ್ಕೆ ಧಾವಿಸಿದ್ದು, ಬೆಂಕಿಯನ್ನು ನಂದಿಸಿದವು. ಅಗ್ನಿ ಅನಾಹುತಕ್ಕೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ಕೇಂದ್ರ ಸರ್ಕಾರವು ಪ್ರಧಾನಮಂತ್ರಿ ಪ್ರಕೃತಿ ವಿಕೋಪ ನಿಧಿಯಿಂದ ಅಗ್ನಿ ಅನಾಹುತದಲ್ಲಿ ಮೃತಪಟ್ಟವರ ಕುಟುಂಬಸ್ಥರಿಗೆ ತಲಾ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದೆ. ಘಟನೆಯಲ್ಲಿ ಮೃತಪಟ್ಟವರ ಕುಟುಂಬಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ತೀವ್ರ ಸಂತಾಪ ಸೂಚಿಸಿದ್ದಾರೆ.

<><><>

ಹೈದರಾಬಾದ್‌ನ ಹುಸೇನ್ ಸಾಗರ್ ಸರೋವರದ ಟ್ಯಾಂಕ್ ಬಂಡ್‌ನಲ್ಲಿ ನಡೆದ ತಿರಂಗಾ ಯಾತ್ರೆಯಲ್ಲಿ ಮಾಜಿ ಉಪರಾಷ್ಟ್ರಪತಿ ಎಂ.ವೆಂಕಯ್ಯನಾಯ್ಡು ಭಾಗಿಯಾದರು. ಈ ವೇಳೆ ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ. ಕಿಶನ್ ರೆಡ್ಡಿ, ಮಹಾರಾಷ್ಟ್ರದ ಮಾಜಿ ರಾಜ್ಯಪಾಲ ಸಿ.ಎಚ್.ವಿದ್ಯಾಸಾಗರ್ ರಾವ್, ಬಿಜೆಪಿ ಸಂಸದರು ಮತ್ತು ಶಾಸಕರು, ನಿವೃತ್ತ ಯೋಧರು 'ತಿರಂಗಾ ಯಾತ್ರೆ'ಯಲ್ಲಿ ಭಾಗವಹಿಸಿದ್ದರು. ಬಳಿಕ ಸಚಿವ ಕಿಶನ್ ರೆಡ್ಡಿ ಮಾತನಾಡಿ, ಜಾತಿ, ಧರ್ಮ, ಭಾಷೆ ಮತ್ತು ಇತರೆ ಪರಿಗಣನೆಗಳನ್ನು ಲೆಕ್ಕಿಸದೆ ದೇಶದ ಜನತೆ ಏಕತೆಯನ್ನು ಸಾಧಿಸಬೇಕಿದೆ. ಪಾಕಿಸ್ತಾನದ ಭಯೋತ್ಪಾದಕ ಮೂಲಸೌಕರ್ಯವನ್ನು ೨೫ ನಿಮಿಷಗಳಲ್ಲಿ ನಾಶಪಡಿಸಿದ ಸೇನಾಪಡೆಗಳ ನಾಯಕತ್ವವನ್ನು ದೇಶದ ಜನರು ಯಾವಾಗಲೂ ನೆನಪಿಸಿಕೊಳ್ಳುತ್ತಾರೆ ಎಂದು ಹೇಳಿದರು. ಮಹಾರಾಷ್ಟ್ರದ ನಾಗ್ಪುರದಲ್ಲಿ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ನೇತೃತ್ವದಲ್ಲಿ 'ತಿರಂಗಾ ಯಾತ್ರೆ' ನಡೆಯಿತು. ಬಳಿಕ ಮಾತನಾಡಿದ ಅವರು, ಆಪರೇಷನ್ ಸಿಂಧೂರ್ ಸಮಯದಲ್ಲಿ ಭಾರತೀಯ ಸಶಸ್ತ್ರ ಪಡೆಗಳು ಅದ್ಭುತ ಶೌರ್ಯ ಪ್ರದರ್ಶಿಸಿದ್ದಾರೆ. ತಿರಂಗಾ ಯಾತ್ರೆಯನ್ನು ನಗರಗಳಲ್ಲಿ ಮಾತ್ರವಲ್ಲದೆ ಪಂಚಾಯತ್ ವ್ಯಾಪ್ತಿಗಳಲ್ಲಿಯೂ ನಡೆಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

<><><>

ನೂತನ ಕ್ಯಾಥೋಲಿಕ್ ಪೋಪ್ ಲಿಯೋ-೧೪ ಅವರು ಇಂದು ಅಧಿಕೃತವಾಗಿ ಕಾರ್ಯಭಾರ ವಹಿಸಿಕೊಂಡಿದ್ದು, ವ್ಯಾಟಿಕನ್ ಸಿಟಿಯ ಸೆಂಟ್ ಪೀಟರ್ಸ್ ಚರ್ಚ್‌ನಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯ ನೇತೃತ್ವ ವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ವಿಶ್ವದ ಹಲವು ಭಾಗಗಳಿಂದ ಬಂದಿದ್ದ ಗಣ್ಯರಲ್ಲದೆ, ೧೦ ಸಾವಿರಕ್ಕೂ ಹೆಚ್ಚು ಮಂದಿ ಭಾಗಿಯಾಗಿದ್ದರು. ಇದಕ್ಕೂ ಮೊದಲು ನೂತನ ಪೋಪ್ ಪದಗ್ರಹಣ ಕಾರ್ಯಕ್ರಮ ನಿಮಿತ್ತ ವ್ಯಾಟಿಕನ್ ಸಿಟಿಯ ಪ್ರಮುಖ ಬೀದಿಗಳಲ್ಲಿ ಬೃಹತ್ ಮೆರವಣಿಗೆ ಸಹ ನಡೆಸಲಾಯಿತು. ಪ್ರಾರ್ಥನೆಯ ಬಳಿಕ ಶುಭ ಸಂದೇಶ ನೀಡಿದ ನೂತನ ಪೋಪ್, ವಿಶ್ವ ಶಾಂತಿಗಾಗಿ ತಾವು ದೇವರಲ್ಲಿ ಪ್ರಾರ್ಥಿಸಿದ್ದಾಗಿ ಹೇಳಿದರು.

<><><>

ಜೈಪುರದಲ್ಲಿ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ದಿನದ ಮೊದಲ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ ೧೦ ರನ್‌ಗಳಿಂದ ಪಂಜಾಬ್ ಕಿಂಗ್ಸ್ ಜಯ ಸಾಧಿಸಿದೆ. ಮೊದಲ ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೧೯ ರನ್ ಮಾಡಿತು. ಈ

ಗುರಿಯನ್ನು ಬೆನ್ನತ್ತಿದ ರಾಜಸ್ಥಾನ್ ರಾಯಲ್ಸ್ ೧೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೦೯ ರನ್ ಮಾಡಲಷ್ಟೇ ಶಕ್ತವಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>